# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ' ಸೋಜಾ ರವರ ನಿಯಮ 72 ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ.

**ವಿಷಯ:** ಕರ್ನಾಟಕ ರಾಜ್ಯದ ದಕ್ಷಿಣ ಕನ್ನಡ, ಉಡುಪಿ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಕುಡುಬಿ ವಾಸಿಸುವ ಕುಡುಬಿ ಸಮುದಾಯದ ಹೆಸರು ಸಂವಿಧಾನದ ಅನುಚ್ಛೇದ 341 (1) ರಂತೆ ಪರಿಶಿಷ್ಟ ಜಾತಿ ಪಟ್ಟಿಯಲ್ಲಿದ್ದು 1956 "ದಿ ಷೆಡ್ಯೂಲ್ಡ್ ಕ್ಯಾಸ್ಟ್‌ಸ್ ಅಂಡ್ ಷೆಡ್ಯೂಲ್ಡ್ ಟ್ರೈಬ್ ಲಿಸ್ಟ್ (ಮೋಡಿಫಿಕೇಷನ್) ಆರ್ಡರ್ 1956" ರಲ್ಲಿ ಕುಡುಬಿ ಜಾತಿಯ ಹೆಸರು ಬಿಟ್ಟು ಹೋಗಿರುವುದನ್ನು ಸೇರಿಸುವ ಬಗ್ಗೆ, ರಾಜ್ಯ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಲು ಮತ್ತು ಈ ಸಮುದಾಯದವರಿಗೆ ನ್ಯಾಯ ಒದಗಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯಲು ಬಯಸುತೇನೆ.

*****

**ಉತ್ತರ:**

ಕುಡುಬಿ ಸಮುದಾಯದವರನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸಲು ಈ ಹಿಂದೆ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇವರ ಮೂಲಕ ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ (ಮಾನವ ಶಾಸ್ತ್ರ ವಿಭಾಗ) ಇವರಿಂದ ಕುಲಶಾಸ್ತ್ರೀಯ ಅಧ್ಯಯನ ನಡೆಸಲಾಗಿತ್ತು. ಸದರಿಯವರಿಂದ ವರದಿ ಪಡೆದು ಅದನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸಿ ಕುಡುಬಿ ಸಮುದಾಯವನ್ನು ಪರಿಶಿಷ್ಟ ಜಾತಿಗೆ ಸೇರಿಸುವ ಬದಲು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರಿಸುವ ಬಗ್ಗೆ ಹೊಸದಾಗಿ ಕುಲಶಾಸ್ತ್ರಿಯ ಅಧ್ಯಯನ ನಡೆಸಲು ತೀರ್ಮಾನಿಸಲಾಗಿತ್ತು.

ಅದರಂತೆ, ಕುಡುಬಿ ಜನಾಂಗವನ್ನು ಕರ್ನಾಟಕ ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರ್ಪಡೆ ಮಾಡುವ ಬಗ್ಗೆ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇವರ ಮೂಲಕ Institute for Social Economic and change (ISEC) ಇವರಿಗೆ ಕುಲ ಶಾಸ್ತ್ರೀಯ ಅಧ್ಯಯನ ಕೈಗೊಳ್ಳಲು ದಿನಾಂಕ: 23-04-2015 ರಲ್ಲಿ ಆದೇಶಿಸಲಾಗಿತ್ತು. ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಮೂಲಕ ದಿನಾಂಕ:02-02-2021 ರಂದು ISEC ಸಂಸ್ಥೆಯವರು ಸರ್ಕಾರಕ್ಕೆ ಕುಲಶಾಸ್ತ್ರೀಯ ಅಧ್ಯಯನ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ವರದಿಯಲ್ಲಿ ಕುಡುಬಿ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸದರಿ ಕುಲಶಾಸ್ತ್ರೀಯ ಅಧ್ಯಯನ ವರದಿಯಲ್ಲಿನ ಶಿಫಾರಸ್ಸನ್ನು ಪರಿಶೀಲಿಸಿ ಪ್ರಸ್ತುತ ಕುಡುಬಿ ಸಮುದಾಯವು ಹಿಂದುಳಿದ ವರ್ಗಗಳ ಪ್ರವರ್ಗ-1ರ ಜಾತಿ ಪಟ್ಟಿಯಲ್ಲಿರುವುದರಿಂದ ಈ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಬಗ್ಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಭಿಪ್ರಾಯವನ್ನು ಕೋರಲಾಗಿತ್ತು.

ಪ್ರಸ್ತುತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಕುಡುಬಿ ಸಮುದಾಯವನ್ನು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರಿಸಲು ಯಾವುದೇ ಆಕ್ಷೇಪಣೆ ಇರುವುದಿಲ್ಲ ಎಂದು ದಿನಾಂಕ:11-07-2025ರಂದು ಅಭಿಪ್ರಾಯ ನೀಡಿರುತ್ತಾರೆ. ಅದರಂತೆ ಕುಡುಬಿ ಸಮುದಾಯವನ್ನು ಕರ್ನಾಟಕ ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರ್ಪಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಕುರಿತು ಪರಿಶೀಲಿಸಿ ಮುಂದಿನ ಕ್ರಮವನ್ನು ಜರುಗಿಸಲಾಗುವುದು.

**STW/SECB/SAD/86/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ